**Akashvani : Bangalore**
**Regional Bulletin In Kannada**
**23.03.2026 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

**23.03.2026 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ಮಧ್ಯಪ್ರಾಚ್ಯ ಸಂಘರ್ಷ; ಯುದ್ಧದಿಂದ ಭಾರತಕ್ಕೆ ಅನಿರೀಕ್ಷಿತ ಸವಾಲು ಲೋಕಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿಕೆ**

**೨. ಹೋಟೆಲ್‌ಗಳಿಗೆ ಒಂದು ಸಾವಿರ ಹೆಚ್ಚುವರಿ ವಾಣಿಜ್ಯ ಸಿಲಿಂಡರ್ ಪೂರೈಕೆಗೆ ಸರ್ಕಾರ ನಿರ್ಧಾರ**

**೩. ದಾವಣಗೆರೆ, ಬಾಗಲಕೋಟೆ ವಿಧಾನಸಭಾ ಉಪಚುನಾವಣೆ; ಕಾಂಗ್ರೆಸ್, ಬಿಜೆಪಿ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ**

**೪. ತಲಾ ಆದಾಯದಲ್ಲಿಯೂ ರಾಜ್ಯಕ್ಕೆ ಅಗ್ರ ಸ್ಥಾನ- ವಿಧಾನಸಭೆಯಲ್ಲಿ ಸಚಿವ ಕೃಷ್ಣಬೈರೇಗೌಡ ಸಮರ್ಥನೆ**

**೫. ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಒಂದು ಸಾವಿರ ಸಿಬ್ಬಂದಿ ನೇಮಕಕ್ಕೆ ಕ್ರಮ- ಮೇಲ್ಮನೆಯಲ್ಲಿ ಸಚಿವ ಡಾ.ಎಂ.ಸಿ.ಸುಧಾಕರ್ ಸ್ಪಷ್ಟನೆ**

**<><*<><>*><>**

ಮಧ್ಯಪ್ರಾಚ್ಯದಲ್ಲಿ ಯುದ್ಧದಿಂದ ಪರಿಸ್ಥಿತಿ ಬಿಗಡಾಯಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಲೋಕಸಭೆಯಲ್ಲಿಂದು ತಿಳಿಸಿದ್ದಾರೆ. ಮಧ್ಯಪ್ರಾಚ್ಯ ಸಂಘರ್ಷದ ಕುರಿತು ಮಾತನಾಡಿದ ಅವರು, ಭಾರತೀಯ ಹಡಗು ಹಾಗೂ ಸಿಬ್ಬಂದಿಯ ಮೇಲೆ ನಿಗಾ ಇಡಲಾಗಿದೆ ಎಂದು ಹೇಳಿದ್ದಾರೆ. ೪೧ ದೇಶಗಳಿಂದ ಭಾರತ ಇಂಧನ ಆಮದು ಮಾಡಿಕೊಳ್ಳುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಹಾರ್ಮುಜ್ ಜಲಸಂಧಿಯಿಂದ ರಸಗೊಬ್ಬರ ಹಾಗೂ ಇಂಧನ ಭಾರತಕ್ಕೆ ಆಗಮಿಸುತ್ತಿದೆ ಎಂದು ತಿಳಿಸಿದ್ದಾರೆ. ಯುದ್ಧವು ಭಾರತಕ್ಕೆ ಅನಿರೀಕ್ಷಿತ ಸವಾಲುಗಳನ್ನು ಸೃಷ್ಟಿಸಿದೆ ಎಂದು ಅವರು ಹೇಳಿದ್ದಾರೆ. ಪರಿಸ್ಥಿತಿ ತಡೆಯಲು ರಾಜತಾಂತ್ರಿಕ ಸಂಬಂಧಗಳ ಅಗತ್ಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆಯನ್ನು ಹೆಚ್ಚಿಸುವುದಾಗಿ ಸರ್ಕಾರ ಘೋಷಿಸಿದೆ. ಬೆಂಗಳೂರಿನಲ್ಲಿಂದು ಅನಿಲ ಸಂಸ್ಥೆಗಳು ಹಾಗೂ ಹೋಟೆಲ್ ಮಾಲೀಕರೊಂದಿಗೆ ಸಭೆ ನಡೆಸಿದ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ, ಅಸ್ತಿತ್ವದಲ್ಲಿರುವ ಹಂಚಿಕೆಗೆ ಒಂದು

ಸಾವಿರ ಸಿಲಿಂಡರ್ ಹೆಚ್ಚಿಸುವುದಾಗಿ ತಿಳಿಸಿದ್ದಾರೆ. ವಾಣಿಜ್ಯ ಅನಿಲ ಬಳಕೆದಾರು ಭಾರತೀಯ ಅನಿಲ ಪ್ರಾಧಿಕಾರ ಲಿಮಿಡೆಟ್‌ನಲ್ಲಿ ನೋಂದಾಯಿಸಿಕೊಳ್ಳಬೇಕು ಎಂದು ಅವರು ಹೇಳಿದ್ದಾರೆ. ಅಕ್ರಮಗಳನ್ನು ತಡೆಯಲು ಮತ್ತು ಬಳಕೆಯನ್ನು ಟ್ರ್ಯಾಕ್ ಮಾಡಲು ಈ ಕ್ರಮವಹಿಸಲಾಗಿದೆ ಎಂದು ತಿಳಿಸಿದ್ದಾರೆ. ಹೋಟೆಲ್‌ಗಳು, ಹಾಸ್ಟೆಲ್‌ಗಳು, ವಸತಿಗೃಹಗಳು ಮತ್ತು ಇಂದಿರಾ ಕ್ಯಾಂಟಿನ್‌ಗಳು ಸೇರಿದಂತೆ ವಾಣಿಜ್ಯ ಬಳಕೆಯ ಎಲ್ಲಾ ವಲಯಗಳಲ್ಲಿ ಹತ್ತು ಸಾವಿರ ಸಿಲಿಂಡರ್‌ಗಳನ್ನು ವಿತರಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ರಾಜ್ಯದ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ನಾಮಪತ್ರ ಸಲ್ಲಿಸಲು ಇಂದು ಕೊನೆಯ ದಿನವಾಗಿದೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಪ್ರಮುಖ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ಇಂದು ಪಕ್ಷಗಳ ಅಧಿಕೃತ ಬಿ ಫಾರಂ ನೊಂದಿಗೆ ಉಮೇದುವಾರಿಕೆ ಸಲ್ಲಿಸಲಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ್ ನಾಮಪತ್ರ ಸಲ್ಲಿಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಸೇರಿದಂತೆ ಹಲವು ಸಚಿವರು, ಶಾಸಕರು ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸರ್ಕಾರದ ಗ್ಯಾರಂಟಿ ಯೋಜನೆಗಳು ಮತ್ತು ಅಭಿವೃದ್ಧಿ ಕಾರ್ಯಗಳೊಂದಿಗೆ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಜಯ ಸಾಧಿಸಲಿದೆ," ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಟಿಕೆಟ್ ನೀಡಿಕೆ ಕುರಿತಂತೆ ಅಲ್ಪಸಂಖ್ಯಾತ ನಾಯಕರಲ್ಲಿ ಉಂಟಾಗಿರುವ ಅಸಮಾಧಾನವನ್ನು ಶೀಘ್ರವೇ ಶಮನಮಾಡಲಾಗುವುದು ಎಂದು ಹೇಳಿದ್ದಾರೆ. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಇದುವರೆಗೂ ೧೧ ನಾಮ ಪತ್ರಗಳು ಸಲ್ಲಿಕೆಯಾಗಿವೆ.

**<><*<><>*><>**

ಬಾಗಲಕೋಟೆ ವಿಧಾನಸಭೆ ಉಪಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಇಂದು ಒಟ್ಟು ಮೂರು ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ನಾಮಪತ್ರ ಸಲ್ಲಿಕೆ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪುರ, ಸಚಿವ ಸತೀಶ ಜಾರಕಿಹೊಳಿ, ಮಾಜಿ ಸಚಿವರುಗಳಾದ ಅಜಯಕುಮಾರ ಸರ್‌ನಾಯಕ, ಎಸ್‌ಆರ್. ಪಾಟೀಲ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು. ಬಿಜೆಪಿ ಅಭ್ಯರ್ಥಿ ಡಾ.ವೀರಣ್ಣ ಚರಂತಿಮಠ ಅವರು ಇಂದು ನಾಮಪತ್ರ ಸಲ್ಲಿಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ಚುನಾವಣಾಧಿಕಾರಿ ಸಂತೋಷ ಜಗಲಾಸರ್ ಅವರಿಗೆ ನಾಮಪತ್ರ ಸಲ್ಲಿಸಿದ್ದಾರೆ. ಈ ಸಂದರ್ಭದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಸಂಸದ ಜಗದೀಶ ಶೆಟ್ಟರ್, ಸಂಸದ ಪಿ.ಸಿ.ಗದ್ದಿಗೌಡರ್, ಮಾಜಿ ಸಚಿವ ಬಿ.ಶ್ರೀರಾಮುಲು ಸೇರಿದಂತೆ ಅನೇಕ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

<><*<><>*><>

ಜಿಎಸ್‌ಟಿ ಸಂಗ್ರಹದ ಬೆಳವಣಿಗೆಯ ದರದಲ್ಲಿ ಕರ್ನಾಟಕ ದೇಶದಲ್ಲೇ ನಂಬರ್ ಒನ್ ಸ್ಥಾನದಲ್ಲಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ವಿಧಾನಸಭೆಯಲ್ಲಿಂದು ಸಮರ್ಥಿಸಿಕೊಂಡಿದ್ದಾರೆ. ತಲಾ ಆದಾಯದಲ್ಲೂ ಅಗ್ರ ಸ್ಥಾನದಲ್ಲಿದ್ದೇವೆ ಎಂದು ತಿಳಿಸಿದ್ದಾರೆ. ಕರ್ನಾಟಕವನ್ನು ಸಬ್ಸಿಡಿ ರಾಜ್ಯವನ್ನಾಗಿ ಮಾಡಬೇಡಿ ಅಭಿವೃದ್ಧಿ ಮತ್ತು ಸಾಧನೆಯ ರಾಜ್ಯವನ್ನಾಗಿ ಮಾಡಿ ಎಂಬ ವಿರೋಧ ಪಕ್ಷಗಳ ಟೀಕೆಗೆ ಉತ್ತರಿಸಿದ ಅವರು, ಗ್ಯಾರಂಟಿ ಹಾಗೂ ಸಬ್ಸಿಡಿಯನ್ನು ತುಚ್ಛೀಕರಿಸಿ, ಸರ್ಕಾರವನ್ನು ಖಳನಾಯಕನಂತೆ ಬಿಂಬಿಸುವ ಪ್ರಯತ್ನ ನಡೆಯುತ್ತಿದೆ ಎಂದು ಪ್ರತಿಪಕ್ಷಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೇಂದ್ರ ಸರ್ಕಾರ ಜಿಎಸ್‌ಟಿ ಪರಿಷ್ಕರಣೆ ಮಾಡಿದ ಬಳಿಕ ಎಲ್ಲಾ ರಾಜ್ಯಗಳಿಗೂ ಜಿಎಸ್‌ಟಿ ಸಂಗ್ರಹದಲ್ಲಿ ನಷ್ಟವಾಗಿದೆ. ಆದರೂ ರಾಜ್ಯದ ಪರಿಸ್ಥಿತಿ ಸುಧಾರಣೆಯಲ್ಲಿದ್ದು, ಹಣಕಾಸು ಸ್ಥಿತಿ ಸಮತೋಲಿತವಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಉನ್ನತ ಶಿಕ್ಷಣ ಇಲಾಖೆಯ ೩೨ ಸಾರ್ವಜನಿಕ ವಿಶ್ವವಿದ್ಯಾನಿಲಯಗಳಲ್ಲಿ ಒಂದು ಸಾವಿರ ಸಿಬ್ಬಂದಿಯ ನೇಮಕಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಮೇಲ್ಮನೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ನ ಸದಸ್ಯ ಡಿ.ಟಿ.ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಉಳಿದ ೩ ಸಾವಿರ ಹುದ್ದೆಗಳನ್ನು ಹಂತಹಂತವಾಗಿ ಭರ್ತಿ ಮಾಡಲಾಗುವುದು ಎಂದು ಹೇಳಿದ್ದಾರೆ. ವಿಶ್ವವಿದ್ಯಾನಿಲಯಗಳಿಗೆ ಸಿಂಡಿಕೇಟ್ ಸದಸ್ಯರುಗಳನ್ನು ನೇಮಕ ಮಾಡಲು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮದಡಿ ರಾಜ್ಯ ಸರ್ಕಾರದಿಂದ ನೇಮಕ ಮಾಡಲಾಗುತ್ತದೆ ಎಂದು ಸದನಕ್ಕೆ ತಿಳಿಸಿದ್ದಾರೆ.

<><*<><>*><>

ರಾಜ್ಯದ ಕರಾವಳಿ ಜಿಲ್ಲೆಗಳಾದ ಉತ್ತರಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳು ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚಿನ ಬಲ ತುಂಬಿವೆ ಎಂದು ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಹಳಿಯಾಳದಲ್ಲಿ ಲೋಕೋಪಯೋಗಿ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ೭ ಕೋಟಿ ೯೮ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಸಮಾವೇಶ ಕೇಂದ್ರ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಪ್ರವಾಸೋದ್ಯಮವು ರಾಜ್ಯಕ್ಕೆ ಆದಾಯ ತರುವ ಮೂಲ ಮಾತ್ರವಲ್ಲದೆ ರಾಜ್ಯದ ಕಲೆ, ಸಂಸ್ಕೃತಿ, ಇತಿಹಾಸದ ಬಗ್ಗೆ ನಾಡಿನ ಜನರಲ್ಲಿ ಜ್ಞಾನವನ್ನು ಬೆಳೆಸುವ ಕ್ಷೇತ್ರವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ರಾಜ್ಯದ ೩೧ ಜಿಲ್ಲೆಗಳು, ಎನ್‌ಎಸ್‌ಎಸ್ ಹಾಗೂ ಶಿಕ್ಷಣ ಸಂಸ್ಥೆಗಳ ಸಹಯೋಗದೊಂದಿಗೆ ರಾಜ್ಯ ಮಟ್ಟದ ವಿಕಸಿತ ಭಾರತ ಯುವ ಸಂಸತ್ತು - ೨೦೨೬ ಆಯೋಜಿಸಲಾಗಿದೆ. ಪ್ರತಿ ಜಿಲ್ಲೆಯ ಅಗ್ರ ೫ ವಿಜೇತರು ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಮೈ ಭಾರತ್ ಕರ್ನಾಟಕ ರಾಜ್ಯ ಕಚೇರಿಯ ಸಹಾಯಕ ನಿರ್ದೇಶಕ ರಾಜೇಶ್ ಕಾರಂತ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಮೂಲಕ ಪ್ರಜಾಪ್ರಭುತ್ವ ಸಂಸ್ಥೆಗಳಲ್ಲಿ ಶಿಸ್ತುಬದ್ಧ ಸಂವಾದದ ಮಹತ್ವವನ್ನು ತುಂಬಲು ಪ್ರಯತ್ನಿಸಲಾಗುತ್ತಿದೆ ಎಂದು ಹೇಳಿದ್ದಾರೆ.

**ಧ್ವನಿ: ರಾಜೇಶ್ ಕಾರಂತ್ ( ೩೬ ಸೆಕೆಂಡ್ಸ್)**

**<><*<><>*><>**

ರಾಜ್ಯದೆಲ್ಲೆಡೆ ಬೇಸಿಗೆ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಉಂಟಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಸಾರ್ವಜನಿಕರು ಸಹಾಯವಾಣಿ ಸಂಪರ್ಕಿಸಿ ಮಾಹಿತಿ ನೀಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ತಿಳಿಸಿದ್ದಾರೆ.

**<><*<><>*><>**

ಮಂಡ್ಯ ಜಿಲ್ಲೆಯ ವಿಶ್ವವಿಖ್ಯಾತ ಮೇಲುಕೋಟೆ ಚಲುವನಾರಾಯಣಸ್ವಾಮಿ ವೈರಮುಡಿ ಉತ್ಸವದ ಧಾರ್ಮಿಕ ಕಾರ್ಯಕ್ರಮಗಳು ಆರಂಭಗೊಂಡಿವೆ. ಹತ್ತು ದಿನಗಳ ಧಾರ್ಮಿಕ ಕಾರ್ಯಕ್ರಮಗಳು ಏಪ್ರಿಲ್ ೪ರವರೆಗೆ ಜರುಗಲಿದ್ದು, ಇದೇ ೧೮ರಂದು ವೈರಮುಡಿ ಕಿರೀಟಧಾರಣೆ ನಡೆಯಲಿದೆ. ವೈರಮುಡಿ ಉತ್ಸವ, ರಥೋತ್ಸವ, ಮಹಾಭಿಷೇಕಗಳಂದು ಸರ್ಕಾರಿ ರಜೆ ಇರುವ ಕಾರಣ ಈ ಬಾರಿ ಹೆಚ್ಚಿನ ಭಕ್ತರು ಆಗಮಿಸುವ ನಿರೀಕ್ಷೆ ಇದೆ. ಮಂಡ್ಯ, ಮೈಸೂರು, ಬೆಂಗಳೂರು ಸೇರಿದಂತೆ ರಾಜ್ಯದ ಪ್ರಮುಖ ಜಿಲ್ಲೆಗಳಿಂದ ಮೇಲುಕೋಟೆಗೆ ಬರಲು ಭಕ್ತರಿಗೆ ವಿಶೇಷ ಬಸ್ ಸೌಕರ್ಯ ಕಲ್ಪಿಸಲಾಗಿದೆ.

**<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ ><><<>**